# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಲಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 29 | Pages. 2 | Date: 26-12-2025, FRIDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 29 - ಪುಟಗಳು : 2 | 26-12-2025 | ಶುಕ್ರವಾರ | Ph: 8762954248 | ದರ : ₹1


# ಮಗುವಿಗೆ ಜನ್ಮ ನೀಡಿದ ಬಾಲಕಿ : ಖಾಸಗಿ ಶಾಲೆಗೆ ನೋಟಿಸ್

## ವರದಿ ಕೇಳಿದ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ | ನ್ಯಾಯಾಧೀಶರಿಂದ ಅಪ್ರಾಪ್ತೆಗೆ ಸಾಂತ್ವನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಹತ್ತನೇ ತರಗತಿ ವಿದ್ಯಾರ್ಥಿನಿ ಮೇಲೆ ನಿರಂತರ ಅತ್ಯಾಚಾರ ಎಸಗಿ ಗರ್ಭಿಣಿಯಾಗಿರುವ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಬಾಲಕಿಗೆ ರಕ್ಷಣೆ ಒದಗಿಸುವುದರ ಜೊತೆಗೆ ಅಪರಾಧಿಯನ್ನು ಕಾನೂನು ಶಿಕ್ಷೆಗೆ ಗುರಿಪಡಿಸಲು ಕ್ರಮ ಕೈಗೊಂಡಿದೆ.

ಚನ್ನರಾಯಪಟ್ಟಣದ ಖಾಸಗಿ ಶಿಕ್ಷಣ ಸಂಸ್ಥೆಯ ವಾಹನ ಚಾಲಕನೊಬ್ಬ ಅದೇ ಶಾಲೆಯ ವಿದ್ಯಾರ್ಥಿನಿಯನ್ನು ಪುಸಲಾಯಿಸಿ ಲೈಂಗಿಕ ದೌರ್ಜನ್ಯ ಎಸಗಿದ್ದ ಮಾತ್ರವಲ್ಲದೆ ಆಕೆ ಹೆಣ್ಣು ಮಗುವಿಗೆ ಜನ್ಮ ನೀಡಿದ್ದು ನಾಗರಿಕ ಸಮಾಜ ತಲೆ ತಗ್ಗಿಸುವಂತೆ ಮಾಡಿದೆ. ಈ ಸಂಬಂಧ ಪೋಕ್ಸೋ ಪ್ರಕರಣ ಸಹ ದಾಖಲಾಗಿದೆ. ವಿಚಾರ ಬಹಿರಂಗವಾಗುತ್ತಿದ್ದಂತೆ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ್ ಕೋಸಂಬೆ ಶಾಲೆಗೆ ಭೇಟಿ ನೀಡಿ ಪರಿಶೀಲಿಸಿದರು.

ಶಿಕ್ಷಣ ಇಲಾಖೆ ಅಧಿಕಾರಿಗಳು ಹಾಗೂ ಶಾಲೆಗೆ ಕಾರಣ ಕೇಳಿ ನೋಟೀಸ್ ಜಾರಿ ಮಾಡಿದ್ದಾರೆ. 10ನೇ ತರಗತಿ ವಿದ್ಯಾರ್ಥಿನಿ ಮೇಲೆ ಅತ್ಯಾಚಾರ ನಡೆದರೂ ಶಿಕ್ಷಕರು, ಪೋಷಕರು ಗಮನ ಹರಿಸದೆ ಇರುವುದು ಬೇಸರದ ಸಂಗತಿ. ಇಲ್ಲಿ ಮುಖ್ಯ ಶಿಕ್ಷಕರ ನಿರ್ಲಕ್ಷ್ಯವೂ ಹೆಚ್ಚಿದೆ. ಮಕ್ಕಳ ಭದ್ರತೆ ವಿಚಾರದಲ್ಲಿ ಸಂಸ್ಥೆ ನಿರ್ಲಕ್ಷ್ಯ ವಹಿಸಿದೆ ಎಂದು ತರಾಟೆಗೆ ತೆಗೆದುಕೊಂಡರು.

ರಾಜ್ಯಾದ್ಯಂತ 2016ರಿಂದ ಮಕ್ಕಳ ರಕ್ಷಣಾ ನೀತಿ ಜಾರಿಗೆ ಬಂದಿದೆ. ಶಾಲೆಯಲ್ಲಿ ಅದು ಅನುಷ್ಠಾನಗೊಂಡಿಲ್ಲ. ಮಕ್ಕಳಿಗೆ ಶಿಕ್ಷಣ ನೀಡುವುದಷ್ಟೇ ಸಂಸ್ಥೆಯ ಕೆಲಸವಲ್ಲ, ಅವರ ಭದ್ರತೆಯೂ ಅಷ್ಟೇ ಮುಖ್ಯವಾಗಿರುತ್ತದೆ ಎಂದರು.

ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯವೆಸಗಿರುವ ಶಾಲಾ ವಾಹನದ ಚಾಲಕ



ರಂಜಿತ್‌ನನ್ನು ಬಂಧಿಸುವಂತೆ ಸೂಚಿಸಿ, ಆತನ ಹಿನ್ನಲೆ, ಬೇರೆ ಯಾವುದಾದರೂ ಪ್ರಕರಣದಲ್ಲಿ ಆರೋಪಿಯಾಗಿದ್ದಾನಾ ಎಂಬುದರ ಕುರಿತು ವರದಿ ನೀಡುವಂತೆ ಡಿವೈಎಸ್ಪಿ ಎನ್. ಕುಮಾರ್ ಅವರಿಗೆ ಸೂಚನೆ ನೀಡಿದರು.

ಶಾಲಾ ವಾಹನದಲ್ಲಿ ಸಿಸಿಟಿವಿ ಅಳವಡಿಕೆ ಮತ್ತು ಮಕ್ಕಳ ಮೇಲೆ ನಿಗಾ ವಹಿಸಲು ಮಹಿಳಾ ಸಿಬ್ಬಂದಿ ನೇಮಕ ಮಾಡದೆ ಇರುವುದು, ಪರಿಣಿತ ಚಾಲಕನನ್ನು ನೇಮಕ ಮಾಡದೆ ಇರುವುದು ಮೇಲ್ನೋಟಕ್ಕೆ ಕಂಡುಬಂದಿದೆ. ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿದ್ದು ತಪ್ಪಿತಸ್ಥರ ವಿರುದ್ಧ ಕ್ರಮ ಖಚಿತವೆಂದರು. ಶಾಲೆಯಲ್ಲಿ ದಾಖಲಾತಿ ಪರಿಶೀಲಿಸಿದ ಅವರು ನಂತರ ಹಾಸನದ ಹಿಮ್ಸ್‌ಗೆ ಭೇಟಿ ನೀಡಿ ಬಾಲಕಿ ಆರೋಗ್ಯ ವಿಚಾರಿಸಿದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕೆ.ಜಿ.ದಿಲೀಪ್, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಬಲರಾಮ್ ಮತ್ತಿತರರಿದ್ದರು.

> ಮಕ್ಕಳಿಗೆ ಪಾಠ ಹೇಳುವುದಷ್ಟೇ ಶಿಕ್ಷಣ ಸಂಸ್ಥೆಗಳ ಕೆಲಸವಲ್ಲ, ವಿದ್ಯಾರ್ಥಿಗಳ ಸುರಕ್ಷತೆಯೂ ಆದ್ಯತೆಯಾಗಬೇಕು. ಈ ಶಾಲೆಯಲ್ಲಿ ನಿಯಮ ಪಾಲನೆಯಾಗಿಲ್ಲ ಎಂಬುದು ಮೇಲ್ನೋಟಕ್ಕೆ ಸ್ಪಷ್ಟವಾಗಿದೆ. ವರದಿ ನೀಡಲು ಅಧಿಕಾರಿಗಳಿಗೆ ಹೇಳಿದ್ದು ಆ ಬಳಿಕ ಮುಂದಿನ ಕ್ರಮ ಕೈಗೊಳ್ಳಲಾಗುವುದು.
>
> **– ಶಶಿಧರ್ ಕೋಸಂಬೆ,**
> **ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಅಧ್ಯಕ್ಷ**



**ಬಾಲಕಿಗೆ ರಕ್ಷಣೆ ನೀಡಿ**

ಅತ್ಯಾಚಾರಕ್ಕೊಳಗಾಗಿ ಮಗುವಿಗೆ ಜನ್ಮ ನೀಡಿರುವ ಅಪ್ರಾಪ್ತ ಬಾಲಕಿಯ ಮನಸ್ಸಿನ ಮೇಲೆ ಈ ಘಟನೆ ವ್ಯತಿರಿಕ್ತ ಪರಿಣಾಮ ಬೀರದಂತೆ ಅಧಿಕಾರಿಗಳು ಎಚ್ಚರ ವಹಿಸಬೇಕೆಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಜಿ.ಕೆ.ದಾಕ್ಷಾಯಿಣಿ ಹೇಳಿದರು.

ಹಿಮ್ಸ್‌ನಲ್ಲಿ ಚಿಕಿತ್ಸೆ ಪಡೆಯುತ್ತಿರುವ ಬಾಲಕಿಯ ಆರೋಗ್ಯ ವಿಚಾರಿಸಿ ಗುರುವಾರ ಸಾಂತ್ವನ ಹೇಳಿದ ಅವರು ನಂತರ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಇದೊಂದು ಹೇಯ ಕೃತ್ಯವಾಗಿದ್ದು ಸಮಾಜವೇ ತಲೆ ತಗ್ಗಿಸುವಂತಾಗಿದೆ. ಇಂತಹ ಘಟನೆಯಿಂದ ಎಲ್ಲರೂ ಎಚ್ಚೆತ್ತುಕೊಳ್ಳಬೇಕಾಗಿದೆ. ಪ್ರಕರಣಕ್ಕೆ ಸಂಬಂಧಿಸಿ ಅಪ್ರಾಪ್ತ ವಿದ್ಯಾರ್ಥಿನಿಗೆ ಮಾನಸಿಕವಾಗಿ ಧೈರ್ಯ ತುಂಬುವ ಕೆಲಸವನ್ನು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಮಾಡಬೇಕು. ವಿದ್ಯಾರ್ಥಿನಿಯ ಶಿಕ್ಷಣವು ಕುಂಠಿತಗೊಳ್ಳದಂತೆ ಮಕ್ಕಳ ಸಮಗ್ರ ರಕ್ಷಣಾ ಘಟಕ, ಮಕ್ಕಳ ಕಲ್ಯಾಣ ಸಮಿತಿ ಹಾಗೂ ಶಿಕ್ಷಣ ಇಲಾಖೆ ಅಗತ್ಯ ಕ್ರಮವಹಿಸಬೇಕೆಂದು ತಿಳಿಸಿದರು.

ನಿತ್ಯ ಬಾಲ್ಯ ವಿವಾಹ ನಿಷೇಧ ಕಾಯ್ದೆ, ಪೋಕ್ಸೋ ಕಾಯ್ದೆ, ಮಕ್ಕಳ ಹಕ್ಕುಗಳ ಕುರಿತು ವ್ಯಾಪಕವಾಗಿ ಅರಿವು ಕಾರ್ಯಕ್ರಮ ಮಾಡುತ್ತಿದ್ದರೂ ಇಂತಹ ಘಟನೆಗಳು ಮರುಕಳಿಸುತ್ತಿವೆ. ವಿದ್ಯಾರ್ಥಿಗಳು ಎಚ್ಚರಿಕೆಯಿಂದ ಇರಬೇಕು. ಮಕ್ಕಳನ್ನು ರಕ್ಷಿಸುವ ಹೊಣೆಗಾರಿಕೆ ಶಾಲೆಯ ಮುಖ್ಯಸ್ಥರು, ಪೋಷಕರು ಹಾಗೂ ಸಮಾಜದ ಮೇಲಿದೆ. ಇಂತಹ ಘಟನೆಗಳು ಜರುಗದಂತೆ ಎಚ್ಚರ ವಹಿಸಬೇಕಾದದ್ದು ನಮ್ಮೆಲ್ಲರ ಕರ್ತವ್ಯ ಎಂದು ತಿಳಿಸಿದರು.

ಘಟನೆಯ ಸತ್ಯಾಸತ್ಯತೆಯ ಕುರಿತು ಪೊಲೀಸರು ಕ್ರಮ ವಹಿಸಿ ತಪ್ಪಿತಸ್ಥರ ವಿರುದ್ಧ ನ್ಯಾಯಾಲಯಕ್ಕೆ ವರದಿ ಸಲ್ಲಿಸಬೇಕು. ನೊಂದ ಬಾಲಕಿಗೆ ಕಾನೂನು ಸೇವೆಗಳ ಪ್ರಾಧಿಕಾರವು ಕಾನೂನು ನೆರವು ನೀಡಲಿದೆ. ಈ ಬಗ್ಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರವನ್ನು ಸಂಪರ್ಕಿಸುವಂತೆ ಬಾಲಕಿಯ ಪೋಷಕರಿಗೆ ತಿಳಿಸಿದರು. ಒನ್ ಸ್ಟಾಪ್ ಸಖಿ ಕೇಂದ್ರದ ಸಮಾಲೋಚಕಿ, ವಕೀಲೆ ಕೆ.ಆರ್.ಬಿಂದೇಶ್ವರಿ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ನಾಗಪ್ಪ, ವೈದ್ಯಾಧಿಕಾರಿ ಡಾ. ಆರ್.ಎಸ್.ಜ್ಯೋತಿ, ಜಿಲ್ಲಾ ಮಕ್ಕಳ ಸಮಗ್ರ ರಕ್ಷಣಾ ಘಟಕದ ಸಿಬ್ಬಂದಿ ಕಾಂತರಾಜು ಹಾಗೂ ಇತರರಿದ್ದರು.

# ಹಿರೀಸಾವೆ ಅಭಿವೃದ್ಧಿಗೆ ಪ್ರಯತ್ನ: ಸಂಸದರ ಭರವಸೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಚನ್ನರಾಯಪಟ್ಟಣ: ವಾಣಿಜ್ಯ ಕೇಂದ್ರ ಹಾಗೂ ಜನವಸತಿಯೊಂದಿಗೆ ಬೃಹತ್ತಾಗಿ ಬೆಳೆದಿರುವ ಹಿರೀಸಾವೆ ಗ್ರಾಮದ ಸರ್ವತೋಮುಖ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ಸಂಸದ ಶ್ರೇಯಸ್ ಪಟೇಲ್ ಭರವಸೆ ನೀಡಿದರು.

ಹಿರೀಸಾವೆ ಗ್ರಾಮದ ಶ್ರೀಕಂಠಯ್ಯ ವೃತ್ತದಲ್ಲಿ ಸಂಸದರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ 10 ಲಕ್ಷ ರೂ. ವೆಚ್ಚದ ಪ್ರಯಾಣಿಕರ ತಂಗುದಾಣ ನಿರ್ಮಾಣದ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿ, ಸರ್ಕಾರದ ಗಮನ ಸೆಳೆದು ಅಗ್ನಿ ಶಾಮಕ ಠಾಣೆಯನ್ನು ಹಿರೀಸಾವೆಯಲ್ಲಿ ಶೀಘ್ರ ಆರಂಭಿಸಲಾಗುವುದು ಎಂದರು.

ಇತ್ತೀಚಿನ ವರ್ಷಗಳಿಂದ ಹಿರೀಸಾವೆ ಹೋಬಳಿ ವ್ಯಾಪ್ತಿಯಲ್ಲಿ ಹೆಚ್ಚು ಬೆಂಕಿ



ಅವಘಡಗಳು ಸಂಭವಿಸುತ್ತಿದ್ದು, ಅಗ್ನಿ ಶಾಮಕ ಠಾಣೆ ಅಗತ್ಯವಿದೆ. ಶೀಘ್ರದಲ್ಲಿಯೇ ಕಲ್ಪಿಸಲಾಗುವುದು ಎಂದು ತಿಳಿಸಿದರು.

ಬೆಂಗಳೂರು-ಹಾಸನ ರೈಲ್ವೆ ಮಾರ್ಗದಲ್ಲಿ ಬೆಳಿಗ್ಗೆ ಮತ್ತು ಸಂಜೆ ಕೆಲವು ರೈಲು ನಿಲುಗಡೆ, ರಾಷ್ಟ್ರೀಯ ಹೆದ್ದಾರಿ-75ರ ಅಂಬೇಡ್ಕರ್ ವೃತ್ತ ಸೇರಿ ಹಲವು ಕಡೆ ಅಂಡರ್ ಪಾಸ್ ನಿರ್ಮಾಣ ಮಾಡಿಕೊಡುವಂತೆ ಸಂಸದರಿಗೆ ಮನವಿ ಸಲ್ಲಿಸಿದರು.

ರಾಷ್ಟ್ರೀಯ ಹೆದ್ದಾರಿ 75ರ ಕೆಲವು ಕಡೆ ಅಂಡರ್‌ಪಾಸ್ ತಾಂತ್ರಿಕ ತೊಂದರೆಗಳನ್ನು ಬಗೆಹರಿಸಲಾಗುವುದು ಮತ್ತು ರೈಲುಗಳ ನಿಲುಗಡೆ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚೆ ನಡೆಸುವುದಾಗಿ ಸಂಸದರು ಭರವಸೆ ನೀಡಿದರು.

ರಾಜ್ಯ ವಿದ್ಯುತ್ ಕಾರ್ಖಾನೆ ನಿಗಮದ ಅಧ್ಯಕ್ಷ ಎಚ್.ಸಿ.ಲಲಿತ್ ರಾಘವ್ ಮಾತನಾಡಿ, ಜುಲೈ 18ಕ್ಕೆ ಮಾಜಿ ಸಚಿವ ದಿ. ಶ್ರೀಕಂಠಯ್ಯ ಜನ್ಮ ಶತಮಾನೋತ್ಸವ ಆಯೋಜಿಸಲಾಗುವುದು ಎಂದರು. ಮಾಜಿ ಶಾಸಕ ಸಿ.ಎಸ್. ಪುಟ್ಟೇಗೌಡ ಮಾತನಾಡಿ, ಜಿಲ್ಲೆಯಲ್ಲಿ ಇಬ್ಬರು ಯುವ ನಾಯಕರಾಗಿದ್ದು, ಬಡವರ ಪರವಾದ ಕೆಲಸ ಮಾಡಿ. ತಾತಂದಿರ ಹೆಸರನ್ನು ಉಳಿಸಿ. ಜನಗಳ ಮಧ್ಯೆ ನಿಂತು ಅವರ ಕಷ್ಟಗಳನ್ನು ಆಲಿಸಲು ಮತ್ಯಾರು ಇಲ್ಲ ಎಂದರು.

ಗ್ರಾಮ ಪಂಚಾಯಿತಿ ಸದಸ್ಯರಾದ ಮಾರುತಿ ಮಂಜುನಾಥ್, ಶಂಕರ್, ಚೇತನ್, ಬಿ.ಆರ್. ಪ್ರಕಾಶ್, ಪುನೀತ್, ಕಾಂಗ್ರೆಸ್ ಮುಖಂಡರಾದ ಯುವರಾಜ್, ಎಚ್.ಎಂ. ರಘು, ಉದಯಕುಮಾರ್, ಎಚ್.ಆರ್. ಬಾಲಕಷ್ಣ, ಬ್ಯಾಡರಹಳ್ಳಿ ಯೋಗೇಶ್ ಇತರರಿದ್ದರು.

# ಸಕಲೇಶಪುರದಲ್ಲಿ ವಾಜಪೇಯಿ ಜನ್ಮ ದಿನಾಚರಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಸಕಲೇಶಪುರ: ಭಾರತ ರತ್ನ, ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರು ಭಾರತೀಯ ರಾಜಕಾರಣದಲ್ಲಿ ಶಿಷ್ಟಾಚಾರ, ಪ್ರಾಮಾಣಿಕತೆ ಹಾಗೂ ಸಮ್ಮಿಲನ ರಾಜಕೀಯಕ್ಕೆ ಹೊಸ ದಿಕ್ಕು ನೀಡಿದ ಮಹಾನಾಯಕ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಪಟ್ಟಣದ ಶಾಸಕರ ಗೃಹ ಕಚೇರಿಯಲ್ಲಿ ತಾಲೂಕು ಬಿಜೆಪಿ ಮಂಡಲ ವತಿಯಿಂದ ಗುರುವಾರ ಆಯೋಜಿಸಿದ್ದ ಭಾರತ ರತ್ನ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮ ದಿನಾಚರಣೆಯಲ್ಲಿ ವಾಜಪೇಯಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ಅಟಲ್ ಬಿಹಾರಿ ವಾಜಪೇಯಿ ಅವರು ಪ್ರಾಮಾಣಿಕತೆ, ನಿಷ್ಠಾವಂತ ನಾಯಕತ್ವ ಹಾಗೂ ಅಜಾತಶತ್ರು



ಗುಣಗಳಿಂದ ದೇಶದ ರಾಜಕಾರಣದಲ್ಲಿ ಅಪರೂಪದ ಸ್ಥಾನ ಪಡೆದವರು. ಕವಿ ಹೃದಯದ ರಾಜಕಾರಣಿಯಾಗಿದ್ದ ವಾಜಪೇಯಿ ಅವರು ಪಕ್ಷಾತೀತ ಗೌರವ ಪಡೆದ ಅಜಾತಶತ್ರು ನಾಯಕರೆಂದು ಪರಿಗಣಿಸಲ್ಪಟ್ಟಿದ್ದರು ಎಂದರು.

ಪ್ರಧಾನಮಂತ್ರಿಯಾಗಿ ಅವರು ದೇಶದ ಮೂಲಸೌಕರ್ಯ ಅಭಿವೃದ್ಧಿಗೆ ಹೆಚ್ಚಿನ ಮಹತ್ವ ನೀಡಿದ್ದು, ಸುವರ್ಣ ಚತುಷ್ಪಥ ಯೋಜನೆ, ಗ್ರಾಮೀಣ ರಸ್ತೆ ಅಭಿವೃದ್ಧಿ ಹಾಗೂ ಪೋಖ್ರಾನ್ ಅಣುಪರೀಕ್ಷೆಗಳಂತಹ ಮಹತ್ವದ ನಿರ್ಣಯಗಳು ಅವರ ಆಡಳಿತದ ಪ್ರಮುಖ ಗುರುತುಗಳಾಗಿವೆ. ಭಾರತದ ವಿದೇಶಾಂಗ ನೀತಿಗೆ ಹೊಸ ಆಯಾಮ ನೀಡಿದ ಅವರು, ಪಾಕಿಸ್ತಾನದೊಂದಿಗೆ ಶಾಂತಿ ಪ್ರಯತ್ನಗಳ ಭಾಗವಾಗಿ ಲಾಹೋರ್ ಬಸ್ ಯಾತ್ರೆ ಕೈಗೊಂಡಿದ್ದರು.

ಆಡಳಿತದಲ್ಲಿ ಪಾರದರ್ಶಕತೆ ಹಾಗೂ ಉತ್ತಮ ಆಡಳಿತಕ್ಕೆ ಒತ್ತು ನೀಡಿದ ಕಾರಣ, ಅವರ ಜನ್ಮದಿನವನ್ನು ದೇಶಾದ್ಯಂತ ಉತ್ತಮ ಆಡಳಿತ ದಿನವಾಗಿ ಆಚರಿಸಲಾಗುತ್ತಿದೆ. ಅಟಲ್ ಬಿಹಾರಿ ವಾಜಪೇಯಿ ಅವರ ಜೀವನ ಹಾಗೂ ಚಿಂತನೆಗಳು ಇಂದಿನ ಮತ್ತು ಮುಂದಿನ ಪೀಳಿಗೆಗೆ ಪ್ರೇರಣೆಯಾಗಿವೆ ಎಂದು ಹೇಳಿದರು.

ಪಟ್ಟಣದ ಪಂಪ್ ಹೌಸ್ ಬಳಿ ಗಿಡ ನೆಡುವ ಮೂಲಕ ವಾಜಪೇಯಿ ಅವರ ಜನ್ಮದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಬಿಜೆಪಿ ತಾಲೂಕು ಅಧ್ಯಕ್ಷ ವಳಲಹಳ್ಳಿ ಅಶ್ವಥ್, ಪ್ರಧಾನ ಕಾರ್ಯದರ್ಶಿಗಳಾದ ಸೋಮಶೇಖರ್, ಮಧು ಬೊಮ್ಮನಕೆರೆ, ನಗರ ಅಧ್ಯಕ್ಷ ಲೋಕೇಶ್, ಮುಖಂಡರಾದ ಕ್ಯಾನಹಳ್ಳಿ ವಾಸು, ಜೈಶಂಕರ್, ಮಾಜಿ ತಾಲೂಕು ಅಧ್ಯಕ್ಷ ರಾಜ್ ಕುಮಾರ್ ಉಪಸ್ಥಿತರಿದ್ದರು.

# ಇತಿಹಾಸ ಪುಟಗಳಲ್ಲಿ ವಾಜಪೇಯಿ ಹೆಸರು ಅಜರಾಮರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಭಾರತದ ರಾಜಕೀಯ ಇತಿಹಾಸದಲ್ಲಿ ಅಟಲ್ ಬಿಹಾರಿ ವಾಜಪೇಯಿ ಹೆಸರು ಅಜರಾಮರವಾಗಿದೆ. ಪ್ರಧಾನಿಯಾಗಿ ಅವರು ಕೈಗೊಂಡ ಕ್ರಮ, ಅಭಿವೃದ್ಧಿಪರ ಯೋಜನೆಗಳು ಜನಮಾನಸದಲ್ಲಿ ಅಚ್ಚಳಿಯದೆ ಉಳಿದಿವೆ ಎಂದು ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಮಿತ್ ಶೆಟ್ಟಿ ಹೇಳಿದರು.

ನಗರದ ಬಿಜೆಪಿ ಜಿಲ್ಲಾ ಕಚೇರಿಯಲ್ಲಿ ಗುರುವಾರ ಹಮ್ಮಿಕೊಂಡಿದ್ದ ಮಾಜಿ ಪ್ರಧಾನಿ ದಿ. ಅಟಲ್ ಬಿಹಾರಿ ವಾಜಪೇಯಿ ಜನ್ಮ ದಿನಾಚರಣೆಯಲ್ಲಿ ಮಾತನಾಡಿ, ಚುನಾವಣೆ ಸೋಲು



ಗೆಲುವಿನ ಕುರಿತು ತಲೆ ಕೆಡಿಸಿಕೊಳ್ಳದ ಅವರು ಪಕ್ಷಕ್ಕಿಂತ ದೇಶ ಮುಖ್ಯವೆಂದು ನಂಬಿದ್ದರು. ಪಕ್ಕಕ್ಕಿಂತ ದೇಶ ಮುಖ್ಯ, ವ್ಯಕ್ತಿಗಿಂತ ಪಕ್ಷ ಮುಖ್ಯ ಎಂಬುದು ಅವರ ನಿಲುವಾಗಿತ್ತು. ಸ್ವಾರ್ಥವಿಲ್ಲದೆ ಪಕ್ಷಾತೀತವಾಗಿ ದುಡಿದರು. ಬಿಜೆಪಿ ಮಾತ್ರವಲ್ಲದೆ ವಿರೋಧ ಪಕ್ಷಗಳಲ್ಲೂ ಸ್ನೇಹಿತರನ್ನು ಹೊಂದಿದ್ದ ಅಪರೂಪದ ರಾಜಕಾರಣಿ ಅವರಾಗಿದ್ದಾರೆ ಎಂದರು.

ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮ ದಿನವನ್ನು ಉತ್ತಮ ಆಡಳಿತ ದಿನವಾಗಿ ಆಚರಿಸಲಾಗುತ್ತದೆ. ಭಾರತದ ಭವಿಷ್ಯವನ್ನು ರೂಪಿಸುವಲ್ಲಿ ಅವರು ಪ್ರಮುಖ ಪಾತ್ರ ವಹಿಸಿದ್ದಾರೆ. ಪಾಕಿಸ್ತಾನ ವಿರುದ್ಧ ಹೋರಾಟದಲ್ಲಿ ನಮ್ಮ ಸೇನೆ ಜಯ ಸಾಧಿಸುವಲ್ಲಿ ವಾಜಪೇಯಿ ಅವರ ಸಹಕಾರ ಹೆಚ್ಚಿದೆ ಎಂದು ಹೇಳಿದರು.

ಪಕ್ಷಕ್ಕಾಗಿ ಹಲವು ವರ್ಷಗಳಿಂದ ದುಡಿದ ರಮೇಶ್ ಮತ್ತು ಪ್ರೇಮಕುಮಾರ್ ಅವರನ್ನು ಗೌರವಿಸಲಾಯಿತು.

ಬಿಜೆಪಿ ರೈತ ಮೋರ್ಚಾ ಜಿಲ್ಲಾಧ್ಯಕ್ಷ ಬಿ.ಹೆಚ್.ನಾರಾಯಣಗೌಡ, ಯುವ ಮೋರ್ಚಾ ರಾಜ್ಯ ಉಪಾಧ್ಯಕ್ಷ ಹರ್ಷಿತ್, ಉಪಾಧ್ಯಕ್ಷ ಶೋಭನ್ ಬಾಬು, ನಗರಸಭೆ ಮಾಜಿ ಅಧ್ಯಕ್ಷ ಆರ್.ಮೋಹನ್ ಕುಮಾರ್, ಯುವ ಮೋರ್ಚಾ ಮಾಜಿ ಅಧ್ಯಕ್ಷ ಚನ್ನಕೇಶವ, ಹೆಚ್.ಎನ್. ನಾಗೇಶ್, ವೇದಾವತಿ, ಸುಮಾ, ದಯಾನಂದ್, ಮಹೇಶ್ ಇತರರು ಇದ್ದರು.

# ಡಿ. 27, 28 ರಂದು ವಾಲಿಬಾಲ್ ಪಂದ್ಯಾವಳಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಚನ್ನರಾಯಪಟ್ಟಣ: ಜಿಲ್ಲಾ ಮಟ್ಟದ ಹೊನಲು ಬೆಳಕಿನ ವಾಲಿಬಾಲ್ ಪಂದ್ಯಾವಳಿಯನ್ನು ಡಿ. 27ರ ಶನಿವಾರ ಮತ್ತು 28ರ ಭಾನುವಾರ ಆಯೋಜಿಸಲಾಗಿದೆ ಎಂದು ಜಿಲ್ಲಾ ವಾಲಿಬಾಲ್ ಅಸೋಸಿಯೇಷನ್ ಪ್ರಧಾನ ಕಾರ್ಯದರ್ಶಿ ಟಿ. ಅರುಣ್ ಕುಮಾರ್ ಹೇಳಿದರು.

ಜಿಲ್ಲಾ ವಾಲಿಬಾಲ್ ಅಸೋಸಿಯೇಷನ್ ಮತ್ತು ಚೌಡೇಶ್ವರಿ ವಾಲಿಬಾಲ್ ಸಂಘದ ಸಹಯೋಗದಲ್ಲಿ ತಾಲ್ಲೂಕಿನ ಹಿರೀಸಾವೆ ಗ್ರಾಮದ ಸರ್ಕಾರಿ ಬಾಲಕಿಯರ ಪ್ರೌಢಶಾಲಾ ಆವರಣದಲ್ಲಿ ನಡೆಸಲಾಗುವುದು ಎಂದರು.

ಸಂಸದ ಶ್ರೇಯಸ್ ಪಟೇಲ್ ಪಂದ್ಯಾವಳಿ ಉದ್ಘಾಟಿಸುವರು. ಶಾಸಕ ಸಿ.ಎನ್. ಬಾಲಕೃಷ್ಣ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಕಾಂಗ್ರೆಸ್ ಮುಖಂಡ ಗೋಪಾಲಸ್ವಾಮಿ, ಎಂಎಲ್‌ಸಿ ಸೂರಜ್ ರೇವಣ್ಣ, ರಾಜ್ಯ ವಿದ್ಯುತ್ ಕಾರ್ಖಾನೆ ನಿಗಮದ ಅಧ್ಯಕ್ಷ ಎಚ್.ಸಿ. ಲಲಿತಾ ರಾಘವ್, ವಾರ್ತಾ ಇಲಾಖೆಯ ನಿವೃತ್ತ ಜಂಟಿ ನಿರ್ದೇಶಕ ಎಚ್.ಬಿ.ದಿನೇಶ್ ಮತ್ತು ರಾಜ್ಯ ವಾಲಿಬಾಲ್ ಅಸೋಸಿಯೇಷನ್ ಅಧ್ಯಕ್ಷ ಹರ್ಷ, ಕಾರ್ಯದರ್ಶಿ ಆಂಟೋನಿ ಜೋಸೆಫ್ ಸೇರಿದಂತೆ ಹಲವು ಜನಪ್ರತಿನಿಧಿಗಳು ಮತ್ತು ಹಿರಿಯ ವಾಲಿಬಾಲ್ ಆಟಗಾರರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದರು.

ವಾಲಿಬಾಲ್‌ನ ಹಿರಿಯ ಆಟಗಾರರನ್ನು ಸನ್ಮಾನಿಸಲಾಗುವುದು. ವಿಜೇತ ತಂಡಗಳ ಬಹುಮಾನವಾಗಿ ಪ್ರಥಮ 40 ಸಾವಿರ ರೂ., ದ್ವಿತೀಯ 30 ಸಾವಿರ ರೂ., ತೃತೀಯ 20 ಸಾವಿರ ರೂ. ಹಾಗೂ ಚತುರ್ಥ 10 ಸಾವಿರ ರೂ. ನೀಡಲಾಗುವುದು. ಪಂದ್ಯಾವಳಿಯಲ್ಲಿ ಜಿಲ್ಲೆಯಲ್ಲಿನ ಪ್ರತಿ ತಾಲ್ಲೂಕಿನಿಂದ 4 ತಂಡಗಳು ಭಾಗವಹಿಸಬಹುದು ಎಂದು ಮಾಹಿತಿ ನೀಡಿದರು.

ಜಿಲ್ಲೆಯ ಆಟಗಾರರಿಗೆ ಮಾತ್ರ ಅವಕಾಶ ನೀಡಲಾಗುವುದು. ಪಂದ್ಯಾವಳಿಯಲ್ಲಿ ಭಾಗವಹಿಸುವವರು ಹೆಚ್ಚಿನ ವಿವರಗಳಿಗೆ 9901130454 ಅನ್ನು ಸಂಪರ್ಕಿಸುವಂತೆ ತಿಳಿಸಿದರು.

# ಜಿಲ್ಲೆಯ ವಿವಿಧೆಡೆ ಸಂಭ್ರಮದ ಕ್ರಿಸ್‌ಮಸ್ ಆಚರಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ನಗರ ಸೇರಿದಂತೆ ಜಿಲ್ಲಾದ್ಯಂತ ವಿವಿಧ ಚರ್ಚ್‌ಗಳಲ್ಲಿ ಗುರುವಾರ ಕ್ರಿಸ್‌ಮಸ್ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸಲಾಯಿತು.

ಡಿ. 24ರ ಮಧ್ಯರಾತ್ರಿಯಿಂದಲೇ ವಿವಿಧ ಚರ್ಚ್‌ಗಳಲ್ಲಿ ವಿಶೇಷ ಪ್ರಾರ್ಥನೆ, ಗಾಯನ ಕಾರ್ಯಕ್ರಮಗಳು ನಡೆದವು. ಕ್ರಿಸ್ಮಸ್ ಪ್ರಯುಕ್ತ ನಗರದ ಚರ್ಚ್‌ಗಳನ್ನು ವಿದ್ಯುತ್ ದೀಪ ಹಾಗೂ ಅಲಂಕಾರಿಕ ವಸ್ತುಗಳಿಂದ ಅಲಂಕರಿಸಲಾಗಿತ್ತು. ಚರ್ಚ್ ಆವರಣದಲ್ಲಿ ಯೇಸು ಕ್ರಿಸ್ತನ ಜನನದ ಕಥೆಯನ್ನು ಬಿಂಬಿಸುವ ಗೊಂಬೆಗಳ ಪ್ರದರ್ಶಿಸಲಾಯಿತು. ಸಾರ್ವಜನಿಕರಿಗೆ ಸಿಹಿ ಹಂಚಲಾಯಿತು.

ಸಂಸದ ಶ್ರೇಯಸ್ ಪಟೇಲ್ ಅವರು ಚನ್ನರಾಯಪಟ್ಟಣದ ಅಲ್ಪಾಲ್ಸ್, ದುದ್ದ ಹೋಬಳಿ ಗಾಡೇನಹಳ್ಳಿಯ ಸಂತ ಇಗ್ನೇಷಿಯಸ್ ಲೊಯೊಲಾ ಚರ್ಚ್‌ಗೆ ಭೇಟಿ ನೀಡಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಗುರುವಾರ ಬೆಳಿಗ್ಗೆ ಹೊಳೆನರಸೀಪುರದ ರೆಹೋಬೋತ್, ಸಿಎಸ್‌ಐ ಚರ್ಚ್, ಹಾಸನದ ಎನ್.ಆರ್. ವೃತ್ತದಲ್ಲಿರುವ ಸಂತ ಅಂತೋಣಿ ಚರ್ಚ್, ಆರ್‌ಸಿ ರಸ್ತೆಯಲ್ಲಿರುವ ಸಿಎಸ್‌ಐ ವೇಸ್ಲೇ ಚರ್ಚ್‌ಗೆ ಭೇಟಿ ನೀಡಿ ಕ್ರೈಸ್ತ ಬಾಂಧವರಿಗೆ ಹಬ್ಬದ ಶುಭಾಶಯ ಕೋರಿದರು. ಸಾಮೂಹಿಕ ಪ್ರಾರ್ಥನೆ ಮೂಲಕ ಲೋಕ ಕಲ್ಯಾಣಕ್ಕೆ ಪ್ರಾರ್ಥಿಸಿದರು.

ಈ ವೇಳೆ ಮಾತನಾಡಿದ ಅವರು, ಯೇಸು ಭಗವಂತನು ಎಲ್ಲರಿಗೂ ಒಳಿತು ಮಾಡಲಿ, ಉತ್ತಮ ಮಳೆ ಹಾಗೂ ಉತ್ತಮ ಬೆಳೆ ದೊರಕಲಿ. ತಾನು ಕ್ರೈಸ್ತ ಸಮುದಾಯದ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡಿರುವುದರಿಂದ ಕ್ರಿಸ್ಮಸ್



ಹಬ್ಬವು ವೈಯಕ್ತಿಕವಾಗಿ ವಿಶೇಷವಾಗಿದೆ. ಧರ್ಮ ಗುರುಗಳ ಮಾರ್ಗದರ್ಶನದಲ್ಲಿ ಸಮಾಜದಲ್ಲಿ ಸೌಹಾರ್ದತೆ, ಪ್ರೀತಿ ಮತ್ತು ಸಹಬಾಳ್ವೆ ಬೆಳೆಸುವ ಕಾರ್ಯವಾಗಬೇಕಿದೆ ಎಂದರು.

ನಗರದ ಸಂತ ಅಂತೋನಿಯವರ ದೇವಾಲಯದ ಫಾದರ್ ಪ್ಯಾಟ್ರಿಕ್ ಜಯರಾವ್ ಮಾತನಾಡಿ, ಕ್ರಿಸ್ಮಸ್ ಎಂದರೆ ಯೇಸು ಕ್ರಿಸ್ತನ ಜನನದ ಹಬ್ಬ. ಪ್ರತಿ ವರ್ಷ ಡಿ. 24ರ ಮಧ್ಯರಾತ್ರಿಯಿಂದಲೇ ಎಲ್ಲರೂ ಪ್ರೀತಿ ಮತ್ತು ಹರ್ಷದಿಂದ ಆಚರಿಸುವ ಹಬ್ಬವಾಗಿದೆ. ಹಲವು ದೇಶಗಳಲ್ಲಿ ಇದು ಸಾಂಸ್ಕೃತಿಕ ಹಬ್ಬವಾಗಿಯೂ ರೂಪುಗೊಂಡಿದೆ ಎಂದರು.

ರೈತಾಪಿ ಬಂಧುಗಳು, ಕಾರ್ಮಿಕ ವರ್ಗ ಹಾಗೂ ಸಮಸ್ತ ಜನರಿಗೆ ಸುಖ, ಶಾಂತಿ, ಸಮೃದ್ಧಿ, ಉತ್ತಮ ಮಳೆ ಮತ್ತು ಬೆಳೆ ದೊರಕಲಿ. ಎಲ್ಲಾ ರೋಗರುಜಿನಗಳಿಂದ ಮುಕ್ತಿಯನ್ನು ನೀಡಲಿ ಎಂದು ಪ್ರಾರ್ಥನೆ ಸಲ್ಲಿಸಲಾಯಿತು ಎಂದು ತಿಳಿಸಿದರು.


# ಸಕಲೇಶಪುರದಲ್ಲಿ ರಾಜಕೀಯ ಚಟುವಟಿಕೆ ಬಿರುಸು

## ಜೆಡಿಎಸ್–ಬಿಜೆಪಿಯಲ್ಲಿ ಜೋರು ಚರ್ಚೆ | ಕ್ಷೇತ್ರ ಬಿಡದ ಮುರಳಿ ಮೋಹನ್

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಮುಂದಿನ ವಿಧಾನಸಭಾ ಚುನಾವಣೆಗೆ ಇನ್ನೂ ಎರಡೂವರೆ ವರ್ಷ ಸಮಯವಿದ್ದರೂ ಕ್ಷೇತ್ರದಲ್ಲಿ ರಾಜಕೀಯ ಚಟುವಟಿಕೆಗಳು ಈಗಿನಿಂದಲೇ ಬಿರುಸು ಪಡೆದಿವೆ. ಮೂರು ಪಕ್ಷಗಳ ರಾಜಕೀಯ ನಾಯಕರು ಚುನಾವಣಾ ತಾಲೀಮು ಮುಂದುವರಿಸಿದ್ದಾರೆ ಎಂಬ ಮಾತುಗಳು ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿವೆ.

2023ರ ಚುನಾವಣೆಯ ನಂತರ ಕೆಲ ಕಾಲ ತಣ್ಣಗಾಗಿದ್ದ ಕ್ಷೇತ್ರದ ರಾಜಕೀಯ ವಾತಾವರಣ ಇತ್ತೀಚಿನ ದಿನಗಳಲ್ಲಿ ನಿಧಾನವಾಗಿ ಚಲನಶೀಲತೆ ಪಡೆದಿದೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮುರಳಿ ಮೋಹನ್, ಜೆಡಿಎಸ್‌ನ ಹೆಚ್.ಕೆ. ಕುಮಾರಸ್ವಾಮಿ ಅವರನ್ನು ಸೋಲಿಸಿ ಶಾಸಕರಾಗಿ ಆಯ್ಕೆಯಾದ ಬಿಜೆಪಿಯ ಸಿಮೆಂಟ್ ಮಂಜು ಅವರು, ಸರ್ಕಾರದ ಯೋಜನೆಗಳ ಅನುಷ್ಠಾನ, ವಿವಿಧ ಕಾಮಗಾರಿಗೆ ಭೂಮಿ ಪೂಜೆ ಮೂಲಕ ಕ್ಷೇತ್ರದಲ್ಲಿ ತಮ್ಮ ಹಾಜರಾತಿಯನ್ನು ನಿರಂತರವಾಗಿ ತೋರಿಸಿಕೊಂಡು ಬಂದಿದ್ದಾರೆ. ಜೊತೆಗೆ ಪರಾಜಿತ ಕಾಂಗ್ರೆಸ್ ಅಭ್ಯರ್ಥಿ ಮುರಳಿ ಮೋಹನ್ ಕೂಡ ಕ್ಷೇತ್ರವನ್ನು ತೊರೆಯದೇ, ಪಕ್ಷ ಸಂಘಟಿಸುವ ಕಾರ್ಯದಲ್ಲಿ ತೊಡಗಿಸಿಕೊಂಡು ಕಾರ್ಯಕರ್ತರೊಂದಿಗೆ ನಿರಂತರ ಸಂಪರ್ಕದಲ್ಲಿರುವುದು ಅವರ ಉಪಸ್ಥಿತಿ ಉಲ್ಲೇಖಾರ್ಹವಾಗಿದೆ. ಅದರ ನಡುವೆ, ಕಳೆದ ಕೆಲ ವರ್ಷಗಳಿಂದ ಸಕ್ರಿಯ ರಾಜಕಾರಣದಿಂದ ದೂರ ಉಳಿದಂತೆ ಕಂಡಿದ್ದ ಜೆಡಿಎಸ್‌ನ ಮಾಜಿ ಸಚಿವ ಹೆಚ್.ಕೆ. ಕುಮಾರಸ್ವಾಮಿ ಅವರು ಇತ್ತೀಚಿನ ದಿನಗಳಲ್ಲಿ ಮತ್ತೆ ಕ್ಷೇತ್ರ ರಾಜಕಾರಣದಲ್ಲಿ ಸಕ್ರಿಯರಾಗುತ್ತಿದ್ದಾರೆ. ಕಳೆದ ಎರಡು ತಿಂಗಳಿನಿಂದ ಕ್ಷೇತ್ರದಲ್ಲೇ ನೆಲೆಸಿರುವ ಅವರು, ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರೊಂದಿಗೆ ನಿರಂತರ ಚರ್ಚೆ ನಡೆಸಿ ಸಂಘಟನೆಗೆ ಒತ್ತು ನೀಡುತ್ತಿದ್ದಾರೆ.



ಇತ್ತೀಚೆಗೆ ಪತ್ರಿಕಾ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಹೆಚ್.ಕೆ. ಕುಮಾರಸ್ವಾಮಿ, ನನ್ನ ಅವಧಿಯಲ್ಲಿ ಮಂಜೂರಾದ ಅನುದಾನಗಳ ಕಾಮಗಾರಿಗಳಿಗೆ ಈಗ, ಎರಡೂವರೆ ವರ್ಷಗಳ ನಂತರ ಶಾಸಕರು ಭೂಮಿಪೂಜೆ ನೆರವೇರಿಸುತ್ತಿದ್ದಾರೆ. ಹಾಗಾದರೆ ಹಾಲಿ ಶಾಸಕರು ಕ್ಷೇತ್ರಕ್ಕೆ ತಂದಿರುವ ಹೊಸ ಅನುದಾನ ಎಷ್ಟು ಎಂದು ಪ್ರಶ್ನಿಸುವ ಮೂಲಕ ಶಾಸಕ ಸಿಮೆಂಟ್ ಮಂಜು ಅವರಿಗೆ ನೇರ ಸವಾಲು ಹಾಕಿದ್ದಾರೆ.

ಅದಕ್ಕೆ ಪ್ರತಿಯಾಗಿ, ಕಾಂಗ್ರೆಸ್ ನಾಯಕ ಮುರಳಿ ಮೋಹನ್ ಅವರು ಪಕ್ಷದ ಸಭೆಯಲ್ಲಿ ಮಾತನಾಡಿ, ಶಾಸಕರು ತಮ್ಮ ಮನೆಯಿಂದ ಹಣ ತಂದು ಅಭಿವೃದ್ಧಿ ಮಾಡುತ್ತಿಲ್ಲ. ಸರ್ಕಾರ ನೀಡಿರುವ ಅನುದಾನದಿಂದಲೇ ಕಾಮಗಾರಿ ನಡೆಯುತ್ತಿವೆ ಎಂದು ಹೇಳುವ ಮೂಲಕ ತಿರುಗೇಟು ನೀಡಿದ್ದಾರೆ.

### ಅಸ್ತಿತ್ವ ಉಳಿಸಿಕೊಳ್ಳುವ ಸವಾಲು

ಈ ರಾಜಕೀಯ ಚರ್ಚೆಗಳ ನಡುವೆ, ಹಾಲಿ ಶಾಸಕ ಸಿಮೆಂಟ್ ಮಂಜು ಅವರು ಡಿ. 22ರಂದು ತಮ್ಮ ಹುಟ್ಟುಹಬ್ಬವನ್ನು ಅದ್ದೂರಿಯಾಗಿ ಆಚರಿಸುವ ಮೂಲಕ ಜನರ ನಡುವೆ ತಮ್ಮ ಸಕ್ರಿಯತೆಯನ್ನು ತೋರಿಸಿದರು. ಜೊತೆಗೆ ವಿಧಾನಸಭೆಯಲ್ಲಿ ಕ್ಷೇತ್ರಕ್ಕೆ ಸಂಬಂಧಿಸಿದ ವಿಚಾರಗಳನ್ನು ಪ್ರಸ್ತಾಪಿಸುತ್ತಿರುವುದನ್ನು ಸಾಮಾಜಿಕ ಜಾಲತಾಣಗಳ ಮೂಲಕ ವ್ಯಾಪಕವಾಗಿ ಪ್ರಚಾರ ಮಾಡುತ್ತಾ ತಮ್ಮ ಅಸ್ತಿತ್ವ ಬಲಪಡಿಸುವ ಪ್ರಯತ್ನ ನಡೆಸುತ್ತಿದ್ದಾರೆ.

ರಾಷ್ಟ್ರಮಟ್ಟದಲ್ಲಿ ಜೆಡಿಎಸ್‌ಬಿಜೆಪಿ ಮೈತ್ರಿ ಮುಂದುವರಿದಿರುವ ಹಿನ್ನಲೆಯಲ್ಲಿ ಕ್ಷೇತ್ರದಲ್ಲಿ ಹೆಚ್.ಕೆ. ಕುಮಾರಸ್ವಾಮಿ ಅವರ ಚಟುವಟಿಕೆಗಳು ಹೆಚ್ಚುತ್ತಿರುವುದು ಹಾಲಿ ಶಾಸಕರಿಗೆ ಟಿಕೆಟ್ ಭದ್ರತೆ ಕುರಿತು ಅಭದ್ರತೆ ಹುಟ್ಟಿಸಿದೆ. ಬಲ್ಲ ಮೂಲಗಳ ಪ್ರಕಾರ, ಮುಂದಿನ ಚುನಾವಣೆಯಲ್ಲೂ ಮೈತ್ರಿ ಮುಂದುವರಿದರೆ ಜಿಲ್ಲೆಯ ಏಳು ವಿಧಾನಸಭಾ ಕ್ಷೇತ್ರಗಳಲ್ಲಿ ಬೇಲೂರು, ಅರಸೀಕೆರೆಯನ್ನು ಬಿಜೆಪಿಗೆ ಬಿಟ್ಟುಕೊಟ್ಟು, ಉಳಿದ ಐದು ಕ್ಷೇತ್ರಗಳಲ್ಲಿ ಜೆಡಿಎಸ್ ಸ್ಪರ್ಧಿಸುವ ಸಾಧ್ಯತೆಯಿದೆ ಎಂಬ ಮಾತುಗಳು ಪಕ್ಷದ ವಲಯದಲ್ಲಿ ಕೇಳಿಬರುತ್ತಿವೆ.

ಜೆಡಿಎಸ್ ವರಿಷ್ಠ ಹೆಚ್.ಡಿ. ಕುಮಾರಸ್ವಾಮಿ ಅವರಿಂದ ಆಕ್ಷೇತ್ರದಲ್ಲಿ ಸಕ್ರಿಯವಾಗಿ ಕೆಲಸ ಮಾಡಿದರೆ ಅವಕಾಶ ದೊರೆಯಬಹುದುಟ ಎಂಬ ಸೂಚನೆ ದೊರೆತ ಹಿನ್ನಲೆಯಲ್ಲಿ ಹೆಚ್.ಕೆ. ಕುಮಾರಸ್ವಾಮಿ ಕ್ಷೇತ್ರದಲ್ಲಿ ಓಡಾಟ ಹೆಚ್ಚಿಸಿ ಪಕ್ಷ ಸಂಘಟನೆಯಲ್ಲಿ ತೊಡಗಿದ್ದಾರೆ ಎನ್ನಲಾಗುತ್ತಿದೆ.

ಒಟ್ಟಾರೆ, ಇನ್ನೂ ಎರಡುವರೆ ವರ್ಷ ಬಾಕಿ ಇದ್ದರೂ ಜೆಡಿಎಸ್, ಕಾಂಗ್ರೆಸ್ ಹಾಗು ಬಿಜೆಪಿ ಪಕ್ಷಗಳ ನಾಯಕರು ಕಾಲಿಗೆ ಚಕ್ರ ಕಟ್ಟಿಕೊಂಡಂತೆ ಕ್ಷೇತ್ರದಾದ್ಯಂತ ಸಂಚರಿಸುತ್ತಿದ್ದು, ಮುಂದಿನ ಚುನಾವಣೆಯ ರಾಜಕೀಯ ಪೈಪೋಟಿಗೆ ವೇದಿಕೆ ಸಿದ್ಧವಾಗುತ್ತಿರುವ ಸೂಚನೆಗಳು ಸ್ಪಷ್ಟವಾಗುತ್ತಿವೆ.

# ಡಿ. 27, 28 ರಂದು ವಿಶ್ವ ಹಿತ ಚಿಂತಕ ಸಮಾವೇಶ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜಿಲ್ಲಾ ಬ್ರಾಹ್ಮಣ ಸಮಾಜದ ವತಿಯಿಂದ ನಗರದ ಶ್ರೀನಿವಾಸ ಕಲ್ಯಾಣ ಮಂಟಪದಲ್ಲಿ ಡಿ.27, 28 ರಂದು ವಿಶ್ವ ಹಿತಚಿಂತಕ ಧಾರ್ಮಿಕ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಬ್ರಾಹ್ಮಣ ಸಮಾಜದ ಜಿಲ್ಲಾಧ್ಯಕ್ಷ ಹೆಚ್.ಎಸ್.ಮಂಜುನಾಥ ಮೂರ್ತಿ ತಿಳಿಸಿದರು.

ಸುದ್ದಿಗೋಷ್ಟಿಯಲ್ಲಿ ಮಾತನಾಡಿ, ಸಮಾವೇಶದ ಅಂಗವಾಗಿ ಲೋಕ ಕಲ್ಯಾಣಾರ್ಥವಾಗಿ ಲೋಕಹಿತ ಕೋಟಿ ಗಾಯತ್ರಿ ಜಪಯಜ್ಞ, ದಶಲಕ್ಷ ಗಾಯತ್ರಿ ಹವನ ಸೇರಿ ವಿವಿಧ ವೈದಿಕ ಮತ್ತು ಆಧ್ಯಾತ್ಮಿಕ ಕಾರ್ಯಕ್ರಮ ಆಯೋಜಿಸಲಾಗಿದೆ. ವೇದೋಕ್ತ ಮಂತ್ರೋಚ್ಚಾರಣೆಯೊಂದಿಗೆ ನಡೆಯುವ ಹವನಗಳು ಭಕ್ತರಲ್ಲಿ ಧಾರ್ಮಿಕ ಭಾವನೆ ಮತ್ತು ಆತ್ಮಶುದ್ಧಿ ಉಂಟುಮಾಡಲಿವೆ ಎಂದರು.

ಕಾರ್ಯಕ್ರಮದಲ್ಲಿ ವಿಷ್ಣು ತತ್ವದ ಮಹತ್ವ, ಭಕ್ತಿಮಾರ್ಗ, ಧರ್ಮಾಚರಣೆ ಹಾಗೂ ಸನಾತನ ಸಂಸ್ಕೃತಿ ಮೌಲ್ಯಗಳ ಕುರಿತು ಧಾರ್ಮಿಕ ಪ್ರವಚನಗಳು ನಡೆಯಲಿದೆ. ಸಮಾಜದ ಹಿರಿಯರು, ಧರ್ಮಗುರು ಹಾಗೂ ಪಂಡಿತರು ಭಾಗವಹಿಸಲಿದ್ದಾರೆ. ಭಕ್ತಾದಿಗಳಲ್ಲಿ ಧಾರ್ಮಿಕ ಜಾಗೃತಿ ಮೂಡಿಸುವ ಜೊತೆಗೆ ಯುವ ಪೀಳಿಗೆಗೆ ಸಂಸ್ಕಾರಗಳ ಮಹತ್ವ ತಿಳಿಸುವುದು ಈ ಸಮಾವೇಶದ ಪ್ರಮುಖ ಉದ್ದೇಶವಾಗಿದೆ ಎಂದರು.

ಸಮಾಜದ ಗಣ್ಯರು ಸಮಾವೇಶದ ಯಶಸ್ಸಿಗೆ ಶ್ರಮಿಸುತ್ತಿದ್ದು, ಜಿಲ್ಲೆಯ ವಿವಿಧ ಭಾಗಗಳಿಂದ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ಎಲ್ಲಾ ಭಕ್ತಾದಿಗಳು ಕುಟುಂಬ ಸಮೇತವಾಗಿ ಆಗಮಿಸಿ ಸಮಾವೇಶದ ಯಶಸ್ಸಿಗೆ ಸಹಕರಿಸಬೇಕೆಂದು ಮನವಿ ಮಾಡಿದರು. ವೆಂಕಟೇಶಮೂರ್ತಿ, ಅಶ್ವಿನಿ, ರಮೇಶ್, ಸುಧೀಂದ್ರ ಇದ್ದರು.

# ಮೂರ್ಕಣ್ಣುಗುಡ್ಡ: ನ್ಯಾಯಾಲಯಕ್ಕೆ ವರದಿ ಸಲ್ಲಿಸಲು ಕ್ರಮ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಮೂರ್ಕಣ್ಣುಗುಡ್ಡ ವ್ಯಾಪ್ತಿಯಲ್ಲಿ ನೈಜ ಪರಿಸ್ಥಿತಿಯನ್ನು ಪರಿಶೀಲಿಸಿ ನ್ಯಾಯಾಲಯಕ್ಕೆ ವರದಿ ಸಲ್ಲಿಸಲಾಗುವುದೆಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಹೇಳಿದರು.



ತಾಲೂಕಿನ ಮೂರ್ಕಣ್ಣು ಗುಡ್ಡ ಸೆಕ್ಷನ್ 4ರ ವ್ಯಾಪ್ತಿಯ ಕಾಡುಮನೆ, ಅಚ್ಚನಹಳ್ಳಿ, ಅಗನಿ ಗ್ರಾಮ ಮುಂತಾದ ಕಡೆ ಮಂಗಳವಾರ ಭೇಟಿ ನೀಡಿದ ಅವರು ಸ್ಥಳೀಯರ ಸಮಸ್ಯೆ ಆಲಿಸಿದರು. ದಶಕಗಳಿಂದ ನಾವು ಇಲ್ಲಿ ಬದುಕು ಕಟ್ಟಿಕೊಂಡಿದ್ದೇವೆ. ಇದೀಗ ಅರಣ್ಯ ಇಲಾಖೆಯವರು ಈ ಜಾಗ ಅರಣ್ಯ ಪ್ರದೇಶವೆಂದು ಒಕ್ಕಲೆಬ್ಬಿಸಲು ಮುಂದಾಗಿದ್ದಾರೆ. ನೂರು ವರ್ಷಗಳ ಹಿಂದೆ ಮೈಸೂರು ಮಹಾರಾಜರು ಇದನ್ನು ಅರಣ್ಯ ಪ್ರದೇಶ ಎಂಬ ಅಧಿಸೂಚನೆ ಹೊರಡಿಸಿದ್ದಾರೆ ಎಂಬ ನೆಪ ಇಟ್ಟುಕೊಂಡು ತೊಂದರೆ ನೀಡಲಾಗುತ್ತಿದೆಯೆಂದು ಸ್ಥಳೀಯರು ಅಳಲು ತೋಡಿಕೊಂಡರು. ಸರ್ಕಾರ ಇಲ್ಲಿ ರಸ್ತೆ ನಿರ್ಮಿಸಿದೆ. ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಿದೆ. ಬೀದಿ ದೀಪಗಳ ವ್ಯವಸ್ಥೆ ಮಾಡಿದೆ. ಶಾಲೆಗಳನ್ನು ತೆರೆಯಲಾಗಿದೆ. ಮನೆ ಕಟ್ಟಲು ಅನುಮತಿ ನೀಡಲಾಗಿದೆ. ಸರ್ಕಾರವೇ ಹಲವಾರು ಬಡ ಕೃಷಿಕರಿಗೆ ಜಮೀನು ಮಂಜೂರು ಮಾಡಿದೆ. ಇದೀಗ ನೂರು ವರ್ಷಗಳ ನಂತರ ಅರಣ್ಯ ಪ್ರದೇಶ ಎನ್ನುವುದು ಎಷ್ಟು ಸರಿ. ಇಲ್ಲಿರುವ ಜಮೀನನ್ನೇ ನಂಬಿಕೊಂಡು ಜೀವನ ಸಾಗಿಸುತ್ತಿದ್ದೇವೆ. ನಮ್ಮನ್ನು ಇಲ್ಲಿಂದ ಒಕ್ಕಲೆಬ್ಬಿಸಿದರೆ ಬದುಕುವುದು ಹೇಗೆ ಎಂದು ಪ್ರಶ್ನಿಸಿದರು. ಅದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ, ಕಳೆದ ಕೆಲವು ದಿನಗಳ ಹಿಂದೆ ಗ್ರಾಮಸ್ಥರು ಪ್ರತಿಭಟನೆ ಮಾಡಿದ ಹಿನ್ನಲೆಯಲ್ಲಿ ನಾನು ಖುದ್ದಾಗಿ ಭೇಟಿ ನೀಡಿದ್ದೇನೆ. ಕಂದಾಯ ದಾಖಲಾತಿಗಳು ಇದ್ದರೆ ನಿಮಗೆ ಯಾವುದೇ ತೊಂದರೆ ಆಗುವುದಿಲ್ಲ. ಮನೆ ಕಟ್ಟಿಕೊಂಡಿರುವವರು ಭಯಪಡುವ ಅವಶ್ಯಕತೆ ಇಲ್ಲ. ಪ್ರಕರಣ ನ್ಯಾಯಾಲಯ ಮೆಟ್ಟಿಲೇರಿರುವುದರಿಂದ ನಮ್ಮ ಇಲಾಖೆಯಿಂದ ಮಾಹಿತಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಲಾಗುವುದು. ಕಂದಾಯ ಭೂಮಿ ಇರುವವರು ಸಾಗುವಳಿ ಮಾಡಬೇಕು ಇಲ್ಲವಾದರೆ ಅದು ಸರ್ಕಾರಿ ಜಮೀನು ಆಗುತ್ತದೆ. ಯಾರೂ ಆತಂಕಪಡುವುದು ಬೇಡ ಎಂದರು.

ಈ ಸಂದರ್ಭದಲ್ಲಿ ಅರಣ್ಯ ಇಲಾಖೆಯವರು ಮೂರ್ಕಣ್ಣುಗುಡ್ಡ ವ್ಯಾಪ್ತಿಯ ಸುಮಾರು 8867 ಎಕರೆ ಜಾಗ 1920ರ ಅಧಿಸೂಚನೆಯಂತೆ ಅರಣ್ಯ ಇಲಾಖೆಗೆ ಸೇರುತ್ತದೆಂದು ಜಿಲ್ಲಾಧಿಕಾರಿಗೆ ತಿಳಿಸಿದರು.

ಉಪವಿಭಾಗಾಧಿಕಾರಿ ಮಂಜುನಾಥ್, ತಹಶೀಲ್ದಾರ್ ಸುಪ್ರೀತಾ, ವಲಯ ಅರಣ್ಯಧಿಕಾರಿ ಹೇಮಂತ್ ಕುಮಾರ್, ಅರಣ್ಯ ಇಲಾಖೆ ಸಿಬ್ಬಂದಿ ಹಾಜರಿದ್ದರು.

# ಜ. 20 ರಂದು ಭೀಮಾ ಕೋರೆಂಗಾವ್ ವಿಜಯೋತ್ಸವ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಸ್ವಾಭಿಮಾನದ ಸಂಕೇತವಾದ ಭೀಮಾ ಕೋರೆಂಗಾವ್ ವಿಜಯೋತ್ಸವವನ್ನು ಜ.20 ರಂದು ನಗರದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಭೀಮಾ ಕೋರೆಂಗಾವ್ ವಿಜಯೋತ್ಸವ ಸಮಿತಿ ಅಧ್ಯಕ್ಷ ಹೆಚ್.ಕೆ.ಸಂದೇಶ್ ತಿಳಿಸಿದರು.



ಸುದ್ದಿಗೋಷ್ಟಿಯಲ್ಲಿ ಮಾತನಾಡಿ, ಕಾರ್ಯಕ್ರಮಕ್ಕೆ ಅಂಬೇಡ್ಕರ್ ಅವರ ಮೊಮ್ಮಗ ಡಾ.ಭೀಮ್‌ರಾವ್ ಅಂಬೇಡ್ಕರ್ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ.

ಅಂದು ಬೆಳಿಗ್ಗೆ ನಗರದ ರೈಲ್ವೆ ನಿಲ್ದಾಣದಿಂದ ಎನ್.ಆರ್.ವೃತ್ತದ ವರೆಗೆ ಕೋರೆಂಗಾವ್ ವಿಜಯೋತ್ಸವ ಸ್ತಂಭದ ಪ್ರತಿಕೃತಿಯ ಭವ್ಯ ಮೆರವಣಿಗೆ ನಡೆಯಲಿದೆ. ಬಳಿಕ ಪ್ರಜಾಸೌಧದ ಪಕ್ಕದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ ಎಂದು ಹೇಳಿದರು.

ಮಹಾರ್ ಸಮುದಾಯದ ಸೈನಿಕರು ಭೀಮಾ ಕೋರೆಂಗಾವ್ ಯುದ್ಧದಲ್ಲಿ ತೋರಿದ ಶೌರ್ಯ, ತ್ಯಾಗ ಹಾಗೂ ಬಲಿದಾನವೇ ಪರಿಶಿಷ್ಟ ಸಮುದಾಯಗಳಿಗೆ ಸ್ವಾಭಿಮಾನದ ದಾರಿಯಾಗಿದೆ. 1817 ಡಿ.31 ರಂದು ಆರಂಭಗೊಂಡು 1818, ಜ.1ರಂದು ಅಂತ್ಯಗೊಂಡ ಭೀಮಾ ಕೋರೆಂಗಾವ್ ಯುದ್ಧದಲ್ಲಿ, ಪೇಶ್ವೆ ಬಾಜಿರಾಯನ ಸೈನ್ಯವನ್ನು ಮಹಾರ್ ಸೈನಿಕರು ಸೋಲಿಸಿ ವಿಜಯ ಸಾಧಿಸಿದ್ದರು. ಈ ವಿಜಯದ ಸ್ಮರಣಾರ್ಥ 1823ರಲ್ಲಿ ಬ್ರಿಟೀಷ್ ಸರ್ಕಾರ 75 ಅಡಿ ಎತ್ತರದ ವಿಜಯ ಸ್ತಂಭ ನಿರ್ಮಿಸಿದ್ದು, ಯುದ್ಧದಲ್ಲಿ ಹುತಾತ್ಮರಾದ 22 ಸೈನಿಕರ ಹೆಸರುಗಳನ್ನು ಅದರಲ್ಲಿ ಕೆತ್ತಲಾಗಿದೆ ಎಂದರು.

ಈ ಐತಿಹಾಸಿಕ ವಿಜಯ ಸ್ಮರಿಸುವ ಉದ್ದೇಶದಿಂದ ಪರಿಶಿಷ್ಟ ಸಮುದಾಯಗಳ ಒಕ್ಕೂಟದ ಮೂಲಕ 208ನೇ ವಿಜಯೋತ್ಸವ ಆಯೋಜಿಸಲಾಗುತ್ತಿದೆ. ಸಮುದಾಯದ ಜನರು ಜಾತ್ಯತೀತವಾಗಿ ಹಾಗೂ ಪಕ್ಷಾತೀತವಾಗಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು. ಭಾರತೀಯ ಭೌದ್ಧ ಮಹಾಸಭಾ, ದಲಿತ ಸಮನ್ವಯ ಸಮಿತಿ, ದಲಿತ ನೌಕರರ ಸಮನ್ವಯ ಸಮಿತಿ, ಅಧಿಕಾರಿಗಳು ಮತ್ತು ನಿವೃತ್ತ ಅಧಿಕಾರಿಗಳ ಸಂಘ, ಹಾಸನ ಎಸ್.ಸಿ/ಎಸ್.ಟಿ ವಕೀಲರು, ಕೆಪಿಟಿಸಿಎಲ್ ನೌಕರರ ಒಕ್ಕೂಟ, ಎಸ್.ಸಿ/ಎಸ್.ಟಿ ಕೆಎಸ್ ಆರ್‌ಟಿಸಿ ನೌಕರರ ಒಕ್ಕೂಟ, ಎಸ್.ಸಿ/ಎಸ್.ಟಿ ಪ್ರಾಥಮಿಕ ಮತ್ತು ಮಾಧ್ಯಮಿಕ ಶಾಲಾ ನೌಕರರ ಕ್ಷೇಮಾಭಿವೃದ್ಧಿ ಸಂಘ, ಭೌದ್ಧ ಅಧ್ಯಯನ ಕೇಂದ್ರ, ಜಿಲ್ಲೆಯ ಎಲ್ಲಾ ಭೌದ್ಧ ವಿಹಾರಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳು, ಎಸ್.ಸಿ/ಎಸ್.ಟಿ ಗುತ್ತಿಗೆದಾರರ ಒಕ್ಕೂಟ ಸೇರಿ ಹಲವು ಸಂಘಟನೆಗಳು ಸಹಭಾಗಿತ್ವ ವಹಿಸಿವೆ ಎಂದು ವಿವರಿಸಿದರು.

ಮುಖಂಡರಾದ ಅಂಬುಗ ಮಲ್ಲೇಶ್, ಉಮೇಶ್, ಮಂಜು ತೇಜೂರ್, ಗೊರೂರು ರಾಜು, ಹೆತ್ತೂರು ನಾಗರಾಜ್, ಶಿವಮ್ಮ, ಭಾಗ್ಯ ಕಲಿವೀರ್ ಇದ್ದರು.



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಮಂಗಳೂರಿನಲ್ಲಿ ಇತ್ತೀಚೆಗೆ ನಡೆದ 5ನೇ ರಾಷ್ಟ್ರೀಯ ಫಿನ್-ಸ್ವಿಮ್ಮಿಂಗ್ ಸ್ಪರ್ಧೆಯಲ್ಲಿ ಹಾಸನದ ಏಳು ವಿದ್ಯಾರ್ಥಿಗಳು ಭಾಗವಹಿಸಿ ಮೂರು ಚಿನ್ನದ ಪದಕ ಪಡೆದಿದ್ದಾರೆ. ಜಿಲ್ಲಾ ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಉಪನಿರ್ದೇಶಕ ಆನಂದಮೂರ್ತಿ ಹಾಗೂ ತರಬೇತುದಾರ ಕಿರಣ್‌ಕುಮಾರ್ ವಿದ್ಯಾರ್ಥಿಗಳಿಗೆ ಅಭಿನಂದಿಸಿದ್ದಾರೆ.



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಹಿಂದು ಹಿತ ರಕ್ಷಣಾ ವೇದಿಕೆ ವತಿಯಿಂದ 2026ನೇ ಸಾಲಿನ ಕ್ಯಾಲೆಂಡರ್ ಅನ್ನು ಪಟ್ಟಣದ ಸಕಲೇಶ್ವರಸ್ವಾಮಿ ದೇವಸ್ಥಾನದಲ್ಲಿ ಬಿಡುಗಡೆ ಮಾಡಲಾಯಿತು. ಮುಖಂಡ ರಘು ಸಕಲೇಶಪುರ, ಹಿರಿಯ ವಕೀಲ ಕೃಷ್ಣಮೂರ್ತಿ, ರಾಮೋಜಿ, ಧರ್ಮೇಶ್, ಕೌಶಿಕ್, ಶೀವು ಜಿಪ್ಪಿ, ಹರೀಶ್ ಆಚಾರಿ ಮುಂತಾದವರಿದ್ದರು.

# ಜಾಗೃತಿ ಮೂಡಿಸಲು ಬೀದಿ ನಾಟಕ ಸಹಕಾರಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಆಲೂರು: ಅಸ್ಪೃಶ್ಯತೆ, ದೌರ್ಜನ್ಯ, ಸ್ತ್ರೀ ಅಸಮಾನತೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಬೀದಿ ನಾಟಕಗಳು ನೆರವಾಗುತ್ತವೆ ಎಂದು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಕೌಸರ್ ಅಹ್ಮದ್ ತಿಳಿಸಿದರು.



ಪಟ್ಟಣದ ಬಸ್ ನಿಲ್ದಾಣ ಮುಂಭಾಗದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ, ಕಲಾವಿದ ಬಿ.ಟಿ.ಮಾನವ ತಂಡದಿಂದ ದೌರ್ಜನ್ಯ ಮತ್ತು ಅಸ್ಪೃಶ್ಯತೆ ನಿವಾರಣೆ ಬಗ್ಗೆ ಅರಿವು ಮೂಡಿಸುವ ಬೀದಿ ನಾಟಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ದೇಶಕ್ಕೆ ಸ್ವಾತಂತ್ರ್ಯ ಬಂದು 78 ವರ್ಷ ಕಳೆದರೂ ಅಸ್ಪೃಶ್ಯತೆ ಆಚರಣೆ ಇಂದಿಗೂ ಜೀವಂತವಾಗಿರುವುದು ವಿಷಾದನೀಯ. ಜನಾಂದೋಲನದ ರೀತಿಯಲ್ಲಿ ಜಾಗೃತಿ ಕಾರ್ಯಕ್ರಮ ಹಮ್ಮಿಕೊಂಡಾಗ ಮಾತ್ರ ಅಸ್ಪೃಶ್ಯತೆ ತೊಲಗಿಸಲು ಸಾಧ್ಯ. ಸಾಮಾಜಿಕ ಕಾರ್ಯಕ್ರಮಗಳನ್ನು ವೈಜ್ಞಾನಿಕ ಮಾನೋಭಾವದಿಂದ ನೋಡಿದಾಗ ಅಸ್ಪೃಶ್ಯತೆ, ಜಾತಿ ಪದ್ಧತಿ ಹಾಗೂ ತಾರತಮ್ಯ ಹೋಗಲಾಡಿಸಬಹುದು. ಅಸ್ಪೃಶ್ಯತೆ ಆಚರಣೆಯಿಂದ ದೇಶದ ಅಭಿವೃದ್ಧಿ ಕುಂಠಿತಗೊಂಡಿದೆ. ಸಮಾಜದ ಅಭಿವೃದ್ಧಿಯ ಮೇಲೆ ದುಷ್ಪರಿಣಾಮ ಬೀರುವ ಸಾಮಾಜಿಕ ಪಿಡುಗುಗಳ ನಿರ್ಮೂಲನೆಗೆ ಪ್ರತಿಯೊಬ್ಬರು ಮುಂದಾಗಬೇಕು. ಅಸ್ಪೃಶ್ಯತೆ ಎಂಬುದು ಸಾಮಾಜಿಕ ಪಿಡುಗಾಗಿದ್ದು ದಲಿತರಷ್ಟೇ ಅಲ್ಲದೆ, ಇತರೆ ಜನಾಂಗದವರು ಅಸ್ಪೃಶ್ಯತೆಗೆ ಒಳಗಾಗುತ್ತಿದ್ದಾರೆ. ಗ್ರಾಮೀಣ ಭಾಗಗಳಲ್ಲಿ ದೌರ್ಜನ್ಯ, ಅಸ್ಪೃಶ್ಯತೆಯ ಆಚರಣೆ ಹೆಚ್ಚು ಕಂಡುಬರುವುದರಿಂದ ಬೀದಿ ನಾಟಕಗಳು, ಜಾನಪದ ಹಾಡುಗಳ ಮೂಲಕ ಅರಿವು ಮೂಡಿಸುವ ಅವಶ್ಯಕತೆ ಇದೆ. ಈ ಪಿಡುಗಿನಿಂದ ತೊಂದರೆಗೆ ಒಳಗಾದವರ ರಕ್ಷಣೆ ಹಾಗೂ ಸಬಲೀಕರಣಕ್ಕಾಗಿ ಸರಕಾರ ಕಾನೂನನ್ನು ಮತ್ತು ಹಲವು ಯೋಜನೆಗಳನ್ನು ಜಾರಿಗೆ ತಂದಿದೆ. ಸಾರ್ವಜನಿಕರು ಇದರ ಉಪಯೋಗಗಳನ್ನು ಪಡೆದುಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಉದ್ಯೋಗ ಖಾತ್ರಿ ಯೋಜನೆ ಸಹಾಯಕ ನಿರ್ದೇಶಕ ಕೇಶವಮೂರ್ತಿ, ಎ.ಎಸ್.ಐ. ನಾಗೇಶ್, ಪಟ್ಟಣ ಪಂಚಾಯಿತಿ ನಿವೃತ್ತ ನೌಕರ ಮಂಜುನಾಥ್, ಹಿರಿಯ ಕಲಾವಿದ ಬಿ. ಟಿ. ಮಾನವ ಉಪಸ್ಥಿತರಿದ್ದರು.

# ಅನ್ನಪೂರ್ಣೇಶ್ವರಿ ಕಲಾ ಸಂಘದಿಂದ ಕುರುಕ್ಷೇತ್ರ ನಾಟಕ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಅನ್ನಪೂರ್ಣೇಶ್ವರಿ ಕಲಾ ಸಂಘದಿಂದ ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ನಾಲ್ಕು ದಿನ ಪೌರಾಣಿಕ ನಾಟಕೋತ್ಸವ ಏರ್ಪಡಿಸಲಾಗಿದೆ.

ಹಿರಿಯ ರಂಗಭೂಮಿ ಕಲಾವಿದ ದಿ. ಬಿ.ಆರ್. ಕೃಷ್ಣೇಗೌಡ ಬಳ್ಳೇಕೆರೆ ಅವರ ಸ್ಮರಣಾರ್ಥ ಬೇಳೂರು ಕ್ರಾಸ್ ಡಿ.ಸಿ. ಪುಟ್ಟರಾಜು ನಿರ್ದೇಶನದಲ್ಲಿ ಕುರುಕ್ಷೇತ್ರ ನಾಟಕವನ್ನು ಗುರುವಾರ ಪ್ರದರ್ಶಿಸಲಾಯಿತು.

ಶಾಸಕ ಸಿಮೆಂಟ್ ಮಂಜು ಮಾತನಾಡಿ, ನಾಟಕ ಕಲೆಯನ್ನು ಉಳಿಸಿ ಬೆಳೆಸುವುದು ಎಲ್ಲರ ಕರ್ತವ್ಯವಾಗಿದೆ. ಮೊಬೈಲ್ ಮುಳುಗಿರುವ ಮಕ್ಕಳನ್ನು ಪೌರಾಣಿಕ ನಾಟಕ ನೋಡಲು ಪೋಷಕರು ಕರೆತರಬೇಕೆಂದರು.

ಸಾಹಿತಿ ಗೊರೂರು ಅನಂತರಾಜು ಮಾತನಾಡಿ, ಬಿ.ಪುಟ್ಟಸ್ವಾಮಯ್ಯ ವಿರಚಿ ಕುರುಕ್ಷೇತ್ರ ನಾಟಕ ಹಾಸನ, ಮೈಸೂರು ಭಾಗದಲ್ಲಿ ಬಹು ಜನಪ್ರಿಯತೆ ಪಡೆದಿದೆ. ಪ್ರೇಕ್ಷಕರು ಎಷ್ಟು ಬಾರಿಯಾದರೂ ಇಷ್ಟ ಪಟ್ಟು ನೋಡುತ್ತಾರೆ. ಈ ನಾಟಕದ ಹಾಡು, ದೃಶ್ಯ, ಸಂಭಾಷಣೆ ಎಲ್ಲವೂ ನವರಸಗಳ ಸಮ್ಮಿಳಿತವಾಗಿ ಪ್ರೇಕ್ಷಕರ ಮನಸ್ಸಿಗೆ ಮುದ ನೀಡುತ್ತದೆ. ಹಳ್ಳಿಯ ಕಲಾವಿದರು ಕಲಾಭವನದಲ್ಲಿ ತಮ್ಮ ಕಲಾಪ್ರತಿಭೆ ತೋರುತ್ತಿರುವುದು, ಡಿ.ವಿ.ನಾಗಮೋಹನ್‌ರಂತಹ ರಂಗ ಸಂಘಟಕರು ನಾಟಕೋತ್ಸವ ನಡೆಸಿ ಪ್ರೇಕ್ಷಕರಿಗೆ ರಂಜನೆ ನೀಡುತ್ತಿರುವುದು ಶ್ಲಾಘನೀಯ ಎಂದರು.

ಕವಿ ಎನ್.ಎಲ್. ಚನ್ನೇಗೌಡ, ವಕೀಲರ ಸಂಘದ ಮಾಜಿ ಅಧ್ಯಕ್ಷ ಜೆ.ಪಿ.ಶೇಖರ್ ನಾಟಕಕ್ಕೆ ಶುಭ ಹಾರೈಸಿದರು.

ನಿವೃತ್ತ ಪ್ರಾಧ್ಯಾಪಕ ಎ.ಹೆಚ್.ಗಣೇಶ್ ಅಂಕಪುರ, ವಕೀಲರು ವಿಜಯಕುಮಾರ್, ಹರೀಶ್, ಕಲಾವಿದರು ರಾಮಲಿಂಗೇಗೌಡ, ಗುಂಡುರಾಜ್, ರಮೇಶ್ ಗೌಡಪ್ಪ, ಹೆಚ್.ಎಂ.ಪ್ರಭಾಕರ್, ಕಲ್ಲಯ್ಯ (ಕುಶಾಲ್), ಯರೇಹಳ್ಳಿ ಮಂಜೇಗೌಡ, ಗೋವಿಂದೇಗೌಡ, ಪೊಲೀಸ್ ರಂಗಸ್ವಾಮಿ, ಕಲಾವಿದೆ ಸಾವಿತ್ರಿ, ಅಶೋಕ್ ಮೈಸೂರು ಇದ್ದರು.

# ಇತಿಹಾಸದಲ್ಲಿ ಈ ದಿನ

## ಡಿಸೆಂಬರ್-26

1606: ವಿಲಿಯಂ ಶೇಕ್ಸ್‌ಪಿಯರ್ ಅವರ ಪ್ರಸಿದ್ಧ ನಾಟಕ ಕಿಂಗ್ ಲಿಯರ್ ಮೊದಲ ಬಾರಿ ಪ್ರದರ್ಶನಗೊಂಡಿತು.

1865: ಅಮೇರಿಕಾದಲ್ಲಿ ದಾಸ್ಯ ಪ್ರಥೆಯನ್ನು ಅಧಿಕೃತವಾಗಿ ರದ್ದುಗೊಳಿಸಿದ 13ನೇ ಸಂವಿಧಾನ ತಿದ್ದುಪಡಿ ಜಾರಿಯಾಯಿತು.

2004: ಹಿಂದೂ ಮಹಾಸಾಗರದಲ್ಲಿ ಭೀಕರ ಸುನಾಮಿ ಸಂಭವಿಸಿ ಭಾರತ, ಶ್ರೀಲಂಕಾ, ಇಂಡೋನೇಷ್ಯಾ ಸೇರಿದಂತೆ ಅನೇಕ ದೇಶಗಳಲ್ಲಿ ಲಕ್ಷಾಂತರ ಜನರು ಪ್ರಾಣ ಕಳೆದುಕೊಂಡರು.

### ಜನನ

1893: ಮಾವೋತ್ಸೆ ತುಂಗ್, ಚೀನಾದ ಕ್ರಾಂತಿಕಾರಿ ನಾಯಕ ಮತ್ತು ಚೀನಾದ ಜನ ಗಣರಾಜ್ಯದ ಸ್ಥಾಪಕ

### ಮರಣ

1972: ಹ್ಯಾರಿ ಎಸ್. ಟ್ರೂಮನ್, ಅಮೇರಿಕಾದ 33ನೇ ಅಧ್ಯಕ್ಷ

# ಜಿಲ್ಲೆಯಲ್ಲಿ ಹೆಚ್ಚಿದ ಬಾಲ್ಯ ಗರ್ಭಿಣಿ ಪ್ರಕರಣ

## ಫಲ ನೀಡದ ಅರಿವು ಕಾರ್ಯಕ್ರಮಗಳು | ಸಾರ್ವಜನಿಕರ ಆತಂಕ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜಿಲ್ಲೆಯಲ್ಲಿ ಬಾಲ್ಯ ಗರ್ಭಿಣಿ ಪ್ರಕರಣಗಳು ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು ನಾಗರಿಕ ಸಮಾಜ ತಲೆ ತಗ್ಗಿಸುವಂತಾಗಿದೆ.

ಒಂದು ವರ್ಷದಲ್ಲಿ 114 ಬಾಲ್ಯ ಗರ್ಭಿಣಿ ಪ್ರಕರಣ ಬೆಳಕಿಗೆ ಬಂದಿದ್ದು ಪೋಕ್ಸೋ ಪ್ರಕರಣ ಹೆಚ್ಚುತ್ತಲೇ ಇದೆ.

ಬಾಲ್ಯವಿವಾಹ, ಲೈಂಗಿಕ ದೌರ್ಜನ್ಯಗಳಿಂದ ಕಲಿಯುವ ವಯಸ್ಸಿನ ಚಿಕ್ಕ ಪ್ರಾಯದ ಹೆಣ್ಣು ಮಕ್ಕಳು ಕೈಯಲ್ಲಿ ಕೂಸು ಹಿಡಿದು ಲಾಲನೆ-ಪಾಲನೆ ಮಾಡುವ ಸ್ಥಿತಿ ನಿರ್ಮಾಣವಾಗಿದೆ. 114 ಬಾಲ ಗರ್ಭಿಣಿಯರಲ್ಲಿ 15 ವರ್ಷದ 3 ಅಪ್ರಪ್ತೆಯರು, 16 ವರ್ಷದ 9 ಬಾಲಕಿಯರು, 17 ವರ್ಷದ 12 ಹಾಗು 18 ವರ್ಷಕ್ಕಿಂತ ಕಡಿಮೆ ವಯಸ್ಸಿನ 87 ಬಾಲಕಿಯರು ತಾಯಿಯಾಗಿರುವುದು ಅಧಿಕವಾಗಿದೆ.

ಮಕ್ಕಳ ರಕ್ಷಣೆಗಾಗಿ ಇರುವ ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ರಚಿತವಾಗಿರುವ ಜಿಲ್ಲಾ ಮಕ್ಕಳ ರಕ್ಷಣಾ ಸಮಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಕ್ಕಳ ಸಂರಕ್ಷಣಾ ಇಲಾಖೆ, ಮಕ್ಕಳ ಸಹಾಯವಾಣಿಯ ಕೆಲಸ ಕಚೇರಿಗೆ ಸೀಮಿತವಾಗಿರುವುದರಿಂದ ಗ್ರಾಮೀಣ ಭಾಗ, ಹಳ್ಳಿಗಳಲ್ಲಿ ನಡೆಯುತ್ತಿರುವ ಬಾಲ್ಯವಿವಾಹ, ದೌರ್ಜನ್ಯ ಪ್ರಕರಣ ತಡೆಗಟ್ಟಿ, ಮಕ್ಕಳಿಗೆ ರಕ್ಷಣೆ ನೀಡಲು ಸಂಪೂರ್ಣ ವಿಫಲವಾಗಿದೆ. ಪೋಷಕರ ಬೇಜವಾಬ್ದಾರಿ, ಮೌಢ್ಯ, ಮಕ್ಕಳ ರಕ್ಷಣೆ ಜವಾಬ್ದಾರಿ ಹೊತ್ತ ಅಧಿಕಾರಿಗಳ ಬೇಜವಾಬ್ದಾರಿಯಿಂದ ಆಟ- ಪಾಠದೊಂದಿಗೆ ಬಾಲ್ಯವನ್ನು ಸಂಭ್ರಮಿಸಬೇಕಾಗಿರುವ ಬಾಲಕಿಯರು ಅನ್ಯರ ತಪ್ಪಿನಿಂದ ಗರ್ಭಧರಿಸಿ, ಏನು ಗೊತ್ತಿಲ್ಲದ ವಯಸ್ಸಿನಲ್ಲಿ ಶಿಶುವನ್ನು ಲಾಲನೆ-ಪೋಷಣೆ ಮಾಡುವಂತಾಗಿದೆ.

ಅಪ್ರಾಪ್ತ ವಯಸ್ಸಿನಲ್ಲಿ ಅನಿರೀಕ್ಷಿತವಾಗಿ ಎದುರಾದ ಇಂತಹ ಜವಾಬ್ದಾರಿಯಿಂದಾಗಿ ತಮ್ಮ ಭವಿಷ್ಯವನ್ನೇ ಬಲಿ ಕೊಡುತ್ತಾರೆ. ಶಾಲೆ ಬಿಟ್ಟ ಬಾಲಕಿಯರು, ಬಾಲ್ಯ ವಿವಾಹ, ಮೊಬೈಲ್ ಸೇರಿ ಇನ್ನಿತರೆ ಆಮಿಷ, ಸಾಮಾಜಿಕ ಮಾಧ್ಯಮಗಳ ಬಳಕೆ, ಪ್ರೀತಿ ನೆಪದಲ್ಲಿ ನಂಬಿಸಿ ಲೈಂಗಿಕವಾಗಿ ಬಳಕೆಯಿಂದ ಬಾಲಕಿಯರು ಗರ್ಭಿಣಿಯರಾಗುತ್ತಿದ್ದಾರೆ.

ಜಿಲ್ಲೆಯಲ್ಲಿ ಬಾಲ್ಯ ವಿವಾಹ, ಬಾಲ ಗರ್ಭಿಣಿ ಹಾಗೂ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಸೇರಿ ಪೋಕ್ಸೋ ಪ್ರಕರಣಗಳ ಕುರಿತು ವ್ಯಾಪಕ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದರೂ ಪ್ರಕರಣಗಳ ಸಂಖ್ಯೆ ಕಡಿಮೆಯಾಗಿಲ್ಲ. ಜಾಥಾ, ಕಾನೂನು ಅರಿವು ಕಾರ್ಯಕ್ರಮ ನಗರ ಪ್ರದೇಶಕ್ಕೆ ಸೀಮಿತವಾಗಿರುವುದರಿಂದ ಜಾಗೃತಿ ಕಾರ್ಯಕ್ರಮಗಳು ಫಲ ನೀಡುತ್ತಿಲ್ಲ.

ಮಕ್ಕಳ ರಕ್ಷಣೆಗಾಗಿ 1098 ಮಕ್ಕಳ ಸಹಾಯವಾಣಿ 24 ಗಂಟೆಯೂ ಕಾರ್ಯನಿರ್ವಹಿಸುತ್ತಿದ್ದು, ವಸತಿ ಶಾಲೆಗಳು, ಸರ್ಕಾರಿ ಹಾಗೂ ಅನುದಾನಿತ-ಅನುದಾನ ರಹಿತ ಶಾಲೆಗಳು ಮತ್ತು ಕಾಲೇಜುಗಳಲ್ಲಿ ದೌರ್ಜನ್ಯ, ಕಿರುಕುಳ ತಡೆ ಕುರಿತು ನಿರಂತರ ಜಾಗೃತಿ ಮೂಡಿಸಲಾಗುತ್ತಿದೆ. ದೂರು ದಾಖಲಾಗಿರುವ ಎಲ್ಲಾ ಪ್ರಕರಣಗಳಲ್ಲಿಯೂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ ಆರೋಪಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248